**ಓ ಎಸ್ 99/2023 ಪಿಡಬ್ಲ್ಯೂ.1**

**ಸಾಕ್ಷಿಯನ್ನು ದಿಃ 16.06.2026 ರಂದು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**ಮುಂದುವರಿದ ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರಿಂದಃ**

ಸರ್ವೆ ನಂ. 79 ರ ಜಮೀನನ್ನು ಅರಣ್ಯ ಭೂಮಿ ಎಂದು ಘೋಷಣೆ ಮಾಡಿರುವ 1995 ರ ಅಧಿಸೂಚನೆಯನ್ನು ನಾವು ಎಲ್ಲಿಯೂ ಪ್ರಶ್ನೆ ಮಾಡಿಲ್ಲ. ಸದರಿ ಅಧಿಸೂಚನೆಯನ್ನು ನಾವು ಇದುವರೆವಿಗೂ ಎಲ್ಲಿಯೂ ಪ್ರಶ್ನೆ ಮಾಡದೆ ಇರುವ ಕಾರಣ ಈ ದಾವೆಯಲ್ಲಿ ಕೋರಿರುವ ಪರಿಹಾರಗಳನ್ನು ಅರ್ಹರಲ್ಲ ಎಂದರೆ ಸರಿಯಲ್ಲ. ನಾನು ಹಾಜರುಪಡಿಸಿರುವ ಗ್ರ್ಯಾಂಟ್ ಸರ್ಟಿಫಿಕೇಟ್ ಜೊತೆಗೆ ಮಂಜೂರಾತಿ ಸ್ಕೆಚ್ ನ್ನು ಹಾಜರುಪಡಿಸದೆ ಇರುವ ಕಾರಣ ಸದರಿ ಗ್ರ್ಯಾಂಟ್ ಸರ್ಟಿಫಿಕೇಟ್ ಊರ್ಜಿತವಲ್ಲ ಎಂದರೆ ಸರಿಯಲ್ಲ. ಸಾಧ್ಯವಾದರೆ ಅರಣ್ಯ ಇಲಾಖೆಗೆ ಸೇರಿದ ಜಮೀನನ್ನು ಲಪಟಾಯಿಸುವ ಉದ್ದೇಶದಿಂದ ಈ ಸುಳ್ಳು ದಾವೆ ಹೂಡಿದ್ದೇನೆ ಎಂದರೆ ಸರಿಯಲ್ಲ. ನಾನು ಹಾಜರುಪಡಿಸಿರುವ ಗ್ರ್ಯಾಂಟ್ ಸರ್ಟಿಫಿಕೇಟ್ ಸೃಷ್ಟಿತ ದಾಖಲೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

**(ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಿಸಿದೆ)**

**ಸಾ ಓ ಹೇ ಸ ಒ**

**(ಬಾಬು ಎನ್)**
**1 ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,**
**ಪಾಂಡವಪುರ**